# ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪುರುಷ ಮತ್ತು ಮಹಿಳಾ)-2018

## ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪುರುಷ ಮತ್ತು ಮಹಿಳಾ)ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಪ್ರಶ್ನಿಸಬಹುದಾದಂತಹ ಪ್ರಶ್ನೆಗಳು

1. ನಿಗಧಿಪಡಿಸಲಾಗಿರುವ ಕನಿಷ್ಠ ವಯೋಮಿತಿ ?

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009 ರ ಪ್ರಕಾರ ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪುರುಷ ಮತ್ತು ಮಹಿಳಾ) ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿ ಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ **25.06.2018 ಕ್ಕೆ** ಕನಿಷ್ಠ 18 ವರ್ಷ ತುಂಬಿರಬೇಕು.

2. ನಿಗಧಿಪಡಿಸಲಾಗಿರುವ ಗರಿಷ್ಠ ವಯೋಮಿತಿ ?

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009 ರ ಪ್ರಕಾರ ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪುರುಷ ಮತ್ತು ಮಹಿಳಾ) ಹುದ್ದೆಗೆ ಗರಿಷ್ಠ ವಯೋಮಿತಿಯು ಅರ್ಜಿಯನ್ನು ಸ್ವೀಕರಿಸಲು ನಿಗಧಿಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ **25.06.2018** ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 25 ವರ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 27 ವರ್ಷ ಹಾಗೂ ಬುಡಕಟ್ಟು ಅಭ್ಯರ್ಥಿಗಳಿಗೆ ಗರಿಷ್ಠ 30 ವರ್ಷಗಳು ಮೀರಿರಬಾರದು.

3. ಮಾಜಿ ಸೈನಿಕರಿಗೆ ನಿಗಧಿಪಡಿಸಲಾಗಿರುವ ವಯೋಮಿತಿ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೇನೆಯಲ್ಲಿ ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ ಮೂರು (3) ವರ್ಷಗಳ ವಿನಾಯಿತಿಯನ್ನು ನೀಡಲಾಗುವುದು.

4. ವಿದ್ಯಾರ್ಹತೆ ?

ಉ: ಎ) **ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪುರುಷ ಮತ್ತು ಮಹಿಳಾ) ಹುದ್ದೆಗಳಿಗೆ ಸಂಬಂಧಿಸಿದಂತೆ** : ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕ: **25.06.2018** ಕ್ಕೆ ಎಸ್.ಎಸ್.ಎಲ್.ಸಿ. / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ **25.06.2018** ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

5. ಬುಡಕಟ್ಟು ಎಂದರೇನು? ಯಾವ ಅಂಶಗಳಲ್ಲಿ ವಿನಾಯಿತಿ ನೀಡಲಾಗಿದೆ?

ಉ: ಬುಡಕಟ್ಟುಗಳು ಎಂದರೆ – "ಉತ್ತರ ಕನ್ನಡ– ಕಾರವಾರ, ದಕ್ಷಿಣ ಕನ್ನಡ– ಮಂಗಳೂರು, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ, ಕೊಡಗು, ಚಾಮರಾಜನಗರ ಮತ್ತು ಮೈಸೂರು ಅರಣ್ಯಗಳಲ್ಲಿ ಸಿದ್ದಿಗರು, ಜೇನುಕುರುಬ, ಕಾಡುಕುರುಬ, ಯೆರವ, ಸೋಲಿಗ, ಕುಡಿಯ, ಗೌಡ್ಲು, ಹಸಲರು, ಮಲೈಕುಡಿಯ ಮತ್ತು ಕೊರಗ ಬುಡಕಟ್ಟು ಸಮುದಾಯಗಳಿಗೆ ಸೇರಿದ ಅಭ್ಯರ್ಥಿಗಳು"

ಕರ್ನಾಟಕ ಅರಣ್ಯ ಪ್ರದೇಶದಲ್ಲಿ ವಾಸಿಸುತ್ತಿರುವ ಬುಡಕಟ್ಟು ಅಭ್ಯರ್ಥಿಗಳ ದೇಹದಾರ್ಢ್ಯತೆಯಲ್ಲಿ ಈ ಕೆಳಕಂಡಂತೆ ಸಡಿಲಿಕೆ ನೀಡಲಾಗಿರುತ್ತದೆ.

| | |
|---|---|
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಎದೆ ಸುತ್ತಳತೆ*** : 5 ಸೆಂ.ಮೀ.ಗಳ ಕನಿಷ್ಠ ವಿಸ್ತರಿಸುವುದರೊಂದಿಗೆ ಸಂಪೂರ್ಣವಾಗಿ ಹಿಗ್ಗಿಸಿದಾಗ 75 ಸೆಂ.ಮೀ.ಗಳಿಗಿಂತ ಕಡಿಮೆ ಇಲ್ಲದಂತೆ. |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಮಹಿಳಾ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 150 ಸೆಂ. ಮೀ. |

6. ಅರ್ಜಿ ಮಾರಾಟವಾಗುತ್ತಿರುವ ಬಗ್ಗೆ ಹೇಗೆ ತಿಳಿದುಕೊಳ್ಳಬಹುದು ?

ಉ: ಅರ್ಜಿ ಮಾರಾಟ ಮಾಡಲಾಗುವುದಿಲ್ಲ. ಆಂಗ್ಲ / ಕನ್ನಡ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದಲ್ಲದೆ ದೂರದರ್ಶನ ಮತ್ತು ಆಕಾಶವಾಣಿಗಳಲ್ಲಿ ಪ್ರಸಾರ ಮಾಡಲಾಗುವುದು. ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ನೀಡಲಾಗುವ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕಾಗಿರುತ್ತದೆ. ಅರ್ಜಿ ಮಾರಾಟವಾಗುತ್ತಿರುವ ಬಗ್ಗೆ ಆಂಗ್ಲ / ಕನ್ನಡ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದಲ್ಲದೆ ದೂರದರ್ಶನ ಮತ್ತು ಆಕಾಶವಾಣಿಗಳಲ್ಲಿ ಪ್ರಸಾರ ಮಾಡಲಾಗುವುದು.

7. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಲಭ್ಯವಿರುವ ಖಾಲಿ ಹುದ್ದೆಗಳು?

ಉ: **ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಐಎಸ್‌ಎಫ್) ಖಾಲಿ ಹುದ್ದೆಗಳ ವಿವರ:**

| | | |
|---|---|---|
| ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಐಎಸ್‌ಎಫ್) (ಪುರುಷ) | – | 355 |
| ಪೊಲೀಸ್ ಕಾನ್ಸ್‌ಟೇಬಲ್ (ಕೆಎಸ್‌ಐಎಸ್‌ಎಫ್) (ಮಹಿಳಾ) | – | 40 |
| **ಒಟ್ಟು** | **=** | **395** |

**ಟಿಪ್ಪಣಿ: ಮೇಲ್ಕಂಡ 395 ಖಾಲಿ ಹುದ್ದೆಗಳ ವರ್ಗೀಕರಣವನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.**

ಆನ್‌ಲೈನ್ ಮುಖಾಂತರ ಅಂದರೆ ಇಲಾಖೆಯ ವೆಬ್‌ಸೈಟ್ www.ksp.gov.in ನಿಂದ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದು.

8. ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಎಷ್ಟು ಶುಲ್ಕವನ್ನು ಪಾವತಿಸಬೇಕು ?

ಉ: ಎಸ್.ಸಿ, ಎಸ್.ಟಿ, ಕ್ಯಾಟಗರಿ–01 ಮತ್ತು ಬುಡಕಟ್ಟು ಅಭ್ಯರ್ಥಿಗಳಿಗೆ ₹ 100/– ಗಳು ಮತ್ತು ಜಿಎಂ, 2ಎ, 2ಬಿ, 3ಎ, 3ಬಿ ರ ಅಭ್ಯರ್ಥಿಗಳಿಗೆ ₹ 250/– ಗಳನ್ನು ಪಾವತಿಸಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ.

9. ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಿ ಸಲ್ಲಿಸಬೇಕಾಗುತ್ತದೆ?

ಉ: ಭರ್ತಿ ಮಾಡಿದ ಅರ್ಜಿಗಳನ್ನು ಅಭ್ಯರ್ಥಿಯು ಆನ್‌ಲೈನ್ www.ksp.gov.in ಮುಖಾಂತರ ನಿಗದಿಪಡಿಸಿದ ಕೊನೆಯ ದಿನಾಂಕ ಅಂದರೆ **25.06.2018** ರ ಸಾಯಂಕಾಲ 6.00 ಗಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ ಹಾಗೂ ದಿನಾಂಕ:**28.06.2018** ರಂದು ಅಧಿಕೃತ ಬ್ಯಾಂಕ್‌ನಲ್ಲಿ (ಬ್ಯಾಂಕ್ ವ್ಯವಹಾರ ಸಮಯದಲ್ಲಿ) ಹಣ ಪಾವತಿಸಲು ಕೊನೆಯ ದಿನವಾಗಿರುತ್ತದೆ.

10. ಅರ್ಜಿಗಳನ್ನು ಜೆರಾಕ್ಸ್ ಮಾಡಿ ಅಥವಾ ಅರ್ಜಿಗಳನ್ನು ಟೈಪ್ ಮಾಡಿ ಪ್ರತಿಗಳನ್ನು ಸಲ್ಲಿಸಬಹುದೇ?

ಉ: ಇಲ್ಲ. ಇಲಾಖೆಯು ನಿಗದಿಪಡಿಸುವ ಮೂಲ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಜೆರಾಕ್ಸ್ ಮಾಡಿದ ಅಥವಾ ಖುದ್ದಾಗಿ ಮತ್ತು ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10.ಎ ಯಾವ ರೀತಿಯಲ್ಲಿ ಶುಲ್ಕವನ್ನು ಪಾವತಿಸಬೇಕು?

ಉ: ಆನ್‌ಲೈನ್ ಮೂಲಕ ಸೃಜಿಸಿರುವ ಬ್ಯಾಂಕ್ ಚಲನ್‌ನ್ನು ಡೌನ್‌ಲೋಡ್ ಮಾಡಿರುವ ಚಲನ್ ಸ್ಟೇಟ್ ಬ್ಯಾಂಕ್ ಅಫ್ ಮೈಸೂರು ಮತ್ತು ಸ್ಟೇಟ್ ಬ್ಯಾಂಕ್ ಆಫ್ ಹೈದ್ರಾಬಾದ್‌ನಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ, ಬೇರಾವುದೇ ಬ್ಯಾಂಕಿನಲ್ಲಿ ಪಾವತಿಸಲು ಅವಕಾಶವಿರುವುದಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ನಾವುದೇ ಸ್ವರೂಪದಲ್ಲಿ ಶುಲ್ಕವನ್ನು ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

10.ಬಿ. ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯನ್ನು ಅಂಶಗಳನ್ನು ಯಾವುದೇ ಹಂತದಲ್ಲಿ ಬದಲಾವಣೆ ಅರ್ಜಿ ಸಲ್ಲಿಸಬಹುದೇ?

ಉ: ಒಮ್ಮೆ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನೀಡಿರುವ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

10.ಸಿ. ಒಮ್ಮೆ ಪಾವತಿಸಿದ ಅರ್ಜಿ ಶುಲ್ಕವನ್ನು ಹಿಂಪಡೆಯಬಹುದೇ?

ಉ: ಒಮ್ಮೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಸೃಜಿಸಿರುವ ಚಲನ್ ಅನ್ನು ಸಂಬಂಧಪಟ್ಟ ಬ್ಯಾಂಕಿನಲ್ಲಿ ಅರ್ಜಿಯ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಕಾರಣಗಳಿಂದ ಹಣವನ್ನು ಹಿಂದಿರುಗಿಸುವುದಿಲ್ಲ.

10.ಡಿ. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಬಹುದೇ?

ಉ: ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ನಂತರ ಪಾವತಿಸಿದ ಅರ್ಜಿಯ ಶುಲ್ಕ ಮತ್ತು ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

10.ಇ. ಮೀಸಲಾತಿ ಅಡಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ತಪ್ಪಾಗಿ ಪ್ರವರ್ಗವನ್ನು ತುಂಬಿರುವ ಅರ್ಜಿಗಳನ್ನು ಯಾವ ರೀತಿಯಲ್ಲಿ ಪರಿಗಣಿಸಬಹುದು?

ಉ: ಅಭ್ಯರ್ಥಿಯು ಅರ್ಜಿಯ ಪ್ರವರ್ಗದ ಅಂಕಣವನ್ನು ತಪ್ಪಾಗಿ ನಮೂದಿಸಿದ್ದಲ್ಲಿ ಅದರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅಭ್ಯರ್ಥಿಗಳನ್ನು ಸಾಮಾನ್ಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

10.ಎಫ್ ಮೀಸಲಾತಿಯ ಅಡಿಯಲ್ಲಿ ಆಯ್ಕೆ ಬಯಸಿವರು ಅಭ್ಯರ್ಥಿಗಳು ಯಾವ ದಿನಾಂಕದ ಪ್ರಮಾಣ ಪತ್ರಗಳನ್ನು ಮತ್ತು ಯಾವ ನಮೂನೆಯಲ್ಲಿ ಪಡೆದಿಟ್ಟುಕೊಂಡಿರಬೇಕು?

ಉ: ಮೀಸಲಾತಿಯ ಅಡಿಯಲ್ಲಿ ಅಯ್ಕೆಯನ್ನು ಬಯಸುವ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಲು ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಅಧಿಸೂಚನೆಯಲ್ಲಿ ನಮೂದಿರುವ ನಿಯಮಗಳ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

10.ಜಿ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ತಾಂತ್ರಿಕ ದೋಷ ಉಂಟಾದ್ದಲ್ಲಿ ಯಾರನ್ನು ಸಂಪರ್ಕಿಸಬೇಕು?

ಉ: ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯಗಳು ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ದೂರವಾಣಿಗೆ ಸಂಖ್ಯೆ:080–2294–3346ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿ ಸಲ್ಲಿಸಬಹುದಾಗಿದೆ.

11. ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪರುಷ ಮತ್ತು ಮಹಿಳಾ) ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಇಲ್ಲ. ಒಬ್ಬ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಾರದು. ಹಾಗೆ ಸಲ್ಲಿಸಿದಲ್ಲಿ, ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಿ, ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

12. ನಾನು ಅರ್ಹನಿರುವ ಬಗ್ಗೆ ಹೇಗೆ ತಿಳಿದುಕೊಳ್ಳುವುದು?

ಉ: ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ನೀವು ಅರ್ಹನಿರುವ ಬಗ್ಗೆ ಗಣಕ ಯಂತ್ರವೇ ತಿಳಿಸುತ್ತದೆ. ಅನರ್ಹನಾಗಿದ್ದರೆ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗುವುದಿಲ್ಲ.

13. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಪಡೆಯುವ ಬಗೆ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಆನ್‌ಲೈನ್ ಮುಖಾಂತರ ಪಡೆಯಬಹುದಾಗಿದೆ. ಪ್ರತ್ಯೇಕವಾಗಿ ಕರೆ ಪತ್ರವನ್ನು ಕಳುಹಿಸಲಾಗುವುದಿಲ್ಲ.

14. ಸಹಿಷ್ಣುತೆ ಪರೀಕ್ಷೆ ಎಂದರೇನು ?

ಉ: ಸಹಿಷ್ಣುತೆ ಪರೀಕ್ಷೆಯಲ್ಲಿ ಈ ಕೆಳಕಂಡ ಅಂಶಗಳಿರುತ್ತವೆ. ಆಂಗ್ಲ ಭಾಷೆಯಲ್ಲಿ Endurance Test ಎಂದು ಕರೆಯಲಾಗುವುದು.

ಡಿ) **ಸಹಿಷ್ಣುತೆ ಪರೀಕ್ಷೆ : (Endurance Test)**

i) ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಸಹಿಷ್ಣುತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು. ಸಹಿಷ್ಣುತೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಉತ್ತೀರ್ಣರಾದಲ್ಲಿ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅರ್ಹರಾಗುತ್ತಾರೆ. ಈ ಕೆಳಕಂಡ ಕ್ರಮದಲ್ಲಿಯೇ ದೈಹಿಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಭಾಗವಹಿಸಿ ಉತ್ತೀರ್ಣರಾಗಬೇಕು. ಈ ಮೂರು ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಅರ್ಹರಾಗುತ್ತಾರೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಸಹಿಷ್ಣುತೆ ಪರೀಕ್ಷೆ ಹಾಗೂ ಪ್ರತಿಯೊಂದು ದೈಹಿಕ ಸಾಮರ್ಥ್ಯ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಈ ಪರೀಕ್ಷೆಗಳಿಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

| **ಸಹಿಷ್ಣುತೆ ಪರೀಕ್ಷೆ** | | |
|---|---|---|
| | **ಅಂಶಗಳು** | **ಅರ್ಹತಾ ವೇಳೆ** |
| ಎಲ್ಲಾ ಸಾಮಾನ್ಯ ಅಭ್ಯರ್ಥಿಗಳಿಗೆ (ಪುರುಷ) | 2 ಕಿಲೋ ಮೀಟರ್ ಓಟ | 10 ನಿಮಿಷ ಮೀರದಂತೆ |
| ಎಲ್ಲಾ ಮಹಿಳಾ / ಮಾಜಿ ಸೈನಿಕ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 2 ನಿಮಿಷ ಮೀರದಂತೆ |

| **ದೇಹದಾರ್ಢ್ಯತೆ ಪರೀಕ್ಷೆ (ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ)** | | |
|---|---|---|
| ಎಲ್ಲಾ ಸಾಮಾನ್ಯ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** | ಸಾಮಾನ್ಯ ಅಭ್ಯರ್ಥಿಗಳಿಗೆ : 170 ಸೆಂ.ಮೀ. ಕಡಿಮೆ ಇಲ್ಲದಂತೆ |
| | | ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವುದಿಲ್ಲ |
| | ***ಎದೆ ಸುತ್ತಳತೆ*** | 86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ)<br>ಕನಿಷ್ಠ ವಿಸ್ತರಣೆ 5 ಸೆಂ. ಮೀ. |
| ಮಹಿಳಾ ಅಭ್ಯರ್ಥಿಗಳಿಗೆ | ಕನಿಷ್ಠ ಎತ್ತರ : 158 ಸೆಂ. ಮೀ. | ಕನಿಷ್ಠ ತೂಕ : 45 ಕೆ.ಜಿ. |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಎದೆ ಸುತ್ತಳತೆ*** : 5 ಸೆಂ.ಮೀ.ಗಳ ಕನಿಷ್ಠ ವಿಸ್ತರಿಸುವುದರೊಂದಿಗೆ ಸಂಪೂರ್ಣವಾಗಿ ಹಿಗ್ಗಿಸಿದಾಗ 75 ಸೆಂ.ಮೀ.ಗಳಿಗಿಂತ ಕಡಿಮೆ ಇಲ್ಲದಂತೆ. | |
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಮಹಿಳಾ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 150 ಸೆಂ. ಮೀ. | |

| **ದೈಹಿಕ ಸಾಮರ್ಥ್ಯ ಪರೀಕ್ಷೆ (ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಮಾತ್ರ)** | | |
|---|---|---|
| | **ಅಂಶಗಳು** | **ಅರ್ಹತಾ ವೇಳೆ / ದೂರ** |
| ಎಲ್ಲಾ ಸಾಮಾನ್ಯ ಅಭ್ಯರ್ಥಿಗಳಿಗೆ | ಎತ್ತರ ಜಿಗಿತ | 1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| | ಉದ್ದ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| | ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| ಮಹಿಳಾ ಮತ್ತು | ಎತ್ತರ ಜಿಗಿತ | 0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |

| | | |
|---|---|---|
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ಉದ್ದ ಜಿಗಿತ | 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| | ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |

**ಟಿಪ್ಪಣಿ:** ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿನ ಎಲ್ಲಾ ಅಂಶದಲ್ಲು ಉತ್ತೀರ್ಣರಾಗಬೇಕು.

**ವಿಶೇಷ ಸೂಚನೆ :–**

**ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ, ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳಿಗೆ ಅಭ್ಯರ್ಥಿಗಳು ತಮ್ಮ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.**

ಟಿಪ್ಪಣಿ :

ಎ) ಸಹಿಷ್ಣುತೆ, ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ಇತರೆ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ಬಿ) ಸಹಿಷ್ಣುತೆ, ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

ಸಿ) ಅಭ್ಯರ್ಥಿಗಳು ಸಹಿಷ್ಣುತೆ, ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

ಡಿ) ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು ಮ್ಯಾನುವಲ್ ಆಗಿ ಮಾಡಲಾಗುವ್ವದು.

ಇ) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ CCTV Camera ಗಳಲ್ಲಿ ಸೆರೆಹಿಡಿಯಲಾಗುವುದು.

15. ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪರುಷ ಮತ್ತು ಮಹಿಳಾ) ಹುದ್ದೆಗೆ ನಿಗದಿ ಪಡಿಸಿರುವ ಎತ್ತರವೆಷ್ಟು ?

ಉ: ಎಲ್ಲಾ ಪುರುಷ ಅಭ್ಯರ್ಥಿಗಳಿಗೆ ಕನಿಷ್ಠ 170 ಸೆಂ.ಮೀಟರ್ ಎತ್ತರವನ್ನು ಮತ್ತು ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ 155 ಸೆಂ.ಮೀ ಎತ್ತರವನ್ನು ನಿಗದಿ ಪಡಿಸಲಾಗಿದೆ.

16. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಯಾರು ನಡೆಸುತ್ತಾರೆ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಡಿಜಿ ಮತ್ತು ಐಜಿಪಿ ರವರಿಂದ ನಾಮನಿರ್ದೇಶಿಸಲ್ಪಟ್ಟ ನೇಮಕಾತಿ ಸಮಿತಿಯು ಪ್ರತಿ ಪಡೆಯ ವ್ಯಾಪ್ತಿಯಲ್ಲಿ ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ನಡೆಸಲಾಗುವುದು.

17. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರು ಮೇಲ್ಮನವಿ ಸಲ್ಲಿಸಲು ಅವಕಾಶವಿದೆಯೇ?

ಉ: ಇಲ್ಲ. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲ. ನೇಮಕಾತಿ ಸಮಿತಿಯು ನಡೆಸುವ ಪರೀಕ್ಷೆಯೇ ಅಂತಿಮವಾಗಿದ್ದು, ಇತರೆ ವೈದ್ಯಾಧಿಕಾರಿಗಳು ನೀಡುವ ಪ್ರಮಾಣ ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

18. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುತ್ತದೆಯೇ?

ಉ: ಇಲ್ಲ. ಈ ಪರೀಕ್ಷೆಯನ್ನು ಕೇವಲ ಮುಂದಿನ ಪ್ರಕ್ರಿಯೆಗೆ ಭಾಗವಹಿಸಲು ಅರ್ಹತೆಯನ್ನು ಪಡೆಯಲು ಮಾತ್ರ ನಡೆಸಲಾಗುವುದು

19. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಯು ಎರಡು ಕೇಂದ್ರಗಳಲ್ಲಿ ಭಾಗಹಿಸಬಹುದೇ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಯು ಅರ್ಜಿ ಸಲ್ಲಿಸಿದ ಜಿಲ್ಲಾ ಪರೀಕ್ಷಾ ಕೇಂದ್ರದಲ್ಲಿ ಮಾತ್ರ ಭಾಗವಹಿಸಬಹುದಾಗಿರುತ್ತದೆ. ಆದರೆ ಅಭ್ಯರ್ಥಿಯು ಒಂದೇ ಕೇಂದ್ರದ ಬೇರೆ ಬೇರೆ ಪರೀಕ್ಷಾ ಕೇಂದ್ರದಲ್ಲಿ ಅಕ್ರಮವಾಗಿ ಭಾಗವಹಿಸುವುದು ಕಂಡುಬಂದಲ್ಲಿ ಅಂತಹವರನ್ನು ಮುಂದಿನ ನೇಮಕಾತಿ ಪ್ರಕ್ರಿಯೆಗೆ ಅನರ್ಹಗೊಳಿಸಲಾಗುವುದು.

20. ಸಹಿಷ್ಣುತೆ ಪರೀಕ್ಷೆಯನ್ನು ಯಾವ ಕ್ರಮದಲ್ಲಿಯಾದರೂ ಮಾಡಬಹುದೇ?

ಉ: ಇಲ್ಲ. ಇದನ್ನು ಇಲಾಖೆಯು ನಿಗದಿ ಪಡಿಸಿರುವ ಕ್ರಮದಲ್ಲಿ ಅಂದರೆ 2 ಕಿಲೋ ಮೀಟರ್ ಓಟ, ಉದ್ದ ಜಿಗಿತ ಅಥವಾ ಎತ್ತರ ಜಿಗಿತ ಮತ್ತು ಗುಂಡು ಎಸೆತಗಳ ಕ್ರಮದಲ್ಲಿಯೇ ಮಾಡಬೇಕಾಗಿರುತ್ತದೆ.

21. ದೇಹದಾರ್ಢ್ಯತೆ / ವೈದ್ಯಕೀಯ ಪರೀಕ್ಷೆಯಲ್ಲಿ ಅನುತ್ತೀರ್ಣನಾದರೆ ಇತರೆ ವೈದ್ಯರಿಂದ ಪ್ರಮಾಣ ಪತ್ರ ಪಡೆದು ನೀಡಬಹುದೇ?

ಉ: ಇಲ್ಲ. ಇತರೆ ಯಾವುದೇ ವೈದ್ಯರಿಂದ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ನೇಮಕಾತಿ ಸಮಿತಿಯಿಂದ ನಿರ್ದೇಶಿಸಲ್ಪಟ್ಟಿರುವ ಅಧಿಕಾರಿಗಳು ತಪಾಸಣೆಯ ನಂತರ ನೀಡಲಾಗುವ ಪ್ರಮಾಣ ಪತ್ರವನ್ನು ಮಾತ್ರ ಪರಿಗಣಿಸಲಾಗುವುದು ಹಾಗೂ ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವೇ ಅಂತಿಮವಾಗಿರುತ್ತದೆ.

22. ನಿಗದಿಗೊಳಿಸಿದ ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೆ ಲಿಖಿತ ಪರೀಕ್ಷೆಗೆ ಅರ್ಹರೇ?

ಉ: ಅಭ್ಯರ್ಥಿಯೂ ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೆ ಲಿಖಿತ ಪರೀಕ್ಷೆಗೆ ಅನರ್ಹನೆಂದು ಪರಿಗಣಿಸಿ, ಮುಂದೆ ನಡೆಯುವ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತಿಲ್ಲ.

23. BMI ಎಂದರೇನು ?

ಉ: BMI ಎಂದರೆ Bio Mass Index Machine ಇದರಿಂದ ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು ಅಳತೆ ಮಾಡಲಾಗುವುದು.

24. ಲಿಖಿತ ಪರೀಕ್ಷೆಗೆ ಅರ್ಹನಾಗಲು ಹೊಂದಿರಬೇಕಾದ ಅರ್ಹತೆಗಳೇನು? ಲಿಖಿತ ಪರೀಕ್ಷೆಗೆ ತರಬೇಕಾ ದಾಖಲಾತಿಗಳೇನು?

ಉ: ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳನ್ನು ನಿಗದಿಪಡಿಸಿರುವ ಸಮಿತಿಯ ಮುಂದೆ ಉತ್ತೀರ್ಣರಾದಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹತೆಯನ್ನು ಪಡೆಯುತ್ತಾರೆ ಮತ್ತು ಸದರಿ ಪರೀಕ್ಷೆಗೆ ಹಾಜರಾಗಲು 1) ಲಿಖಿತ ಪರೀಕ್ಷಯ ಕರೆಪತ್ರ. 2) ಸಹಿಷ್ಣುತೆ ಮತ್ತು ದೇಹದಾಢ್ಯತೆ ಪರೀಕ್ಷಯ ಫಲಿತಾಂಶ ಹಾಳೆ ಮತ್ತು 3) ಗುರುತಿನ ಚೀಟಿಯನ್ನು ತರತಕ್ಕದ್ದು, ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

25. ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಯಾವ ಭಾಷೆಯಲ್ಲಿ ಇರುತ್ತದೆ ?

ಉ: ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಕನ್ನಡ / ಆಂಗ್ಲ ಭಾಷೆಯಲ್ಲಿ ಇರುತ್ತದೆ.

26. ಲಿಖಿತ ಪರೀಕ್ಷೆಯನ್ನು ಯಾವ ಭಾಷೆಯಲ್ಲಿ ಉತ್ತರಿಸಬಹುದು ?

ಉ: ಲಿಖಿತ ಪರೀಕ್ಷೆಯನ್ನು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಸರಿಯಾದ ಉತ್ತರಗಳನ್ನು ಗುರುತಿಸಬೇಕಾಗುತ್ತದೆ.

27. ಇಲಾಖೆಯು ನಡೆಸುವ ಪರೀಕ್ಷೆಗಳಿಗೆ ಹಾಜರಾದಲ್ಲಿ ಪರೀಕ್ಷಾ ಭತ್ಯೆ ನೀಡಲಾಗುತ್ತದೆಯೇ? ಲಿಖಿತ ಪರೀಕ್ಷಾ ಕೇಂದ್ರದ ಕೊಠಡಿಯಲ್ಲಿ ಹಾಜರಾಗುವ ಸಮಯ?

ಉ: ಇಲ್ಲ. ಇಲಾಖೆಯು ನಡೆಸುವ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಯಾವುದೇ ತರಹದ ಪರೀಕ್ಷಾ ಭತ್ಯೆ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗಸೂಚನೆಗಳನ್ನು ನೀಡುವರು.

28. ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನನ್ನು ಬಳಸಬಹುದೇ ?

ಉ: ಇಲ್ಲ. ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನ್, ಪೇಜರ್, ಕ್ಯಾಲ್ಕುಲೇಟರ್, ಲ್ಯಾಪ್‌ಟಾಪ್‌ಗಳ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಿದೆ. ಅಭ್ಯರ್ಥಿಯ ಪರೀಕ್ಷಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿರುವು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಗಳನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವ್ವದು.

29. ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪರುಷ ಮತ್ತು ಮಹಿಳಾ) ಹುದ್ದೆಯ ಪ್ರಶ್ನೆ ಪತ್ರಿಕೆಗೆ ನಿಗದಿಪಡಿಸಿರುವ ಗರಿಷ್ಠ ಅಂಕಗಳೆಷ್ಟು ?

ಉ: ವಿಶೇಷ ರಿಸರ್ವ್ ಪೊಲೀಸ್ ಕಾನ್ಸ್‌ಟೆಬಲ್ (ಪುರುಷ ಮತ್ತು ಮಹಿಳಾ) ಹುದ್ದೆಯ ಲಿಖಿತ ಪರೀಕ್ಷೆಯಲ್ಲಿ 100 ಅಂಕಗಳ ಕನ್ನಡ ಅಥವಾ ಆಂಗ್ಲ ಭಾಷೆಯ ಒಂದು ಪ್ರಶ್ನೆ ಪತ್ರಿಕೆಯಿರುತ್ತದೆ. ಅದು ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple choice) ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಭಾರತದ ಸಂವಿಧಾನ, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಸಾಮಾನ್ಯ ಮಾನಸಿಕ ಸಾಮರ್ಥ್ಯ ಮತ್ತು ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತದೆ. ಪ್ರತಿ ಸರಿ ಉತ್ತರಕ್ಕೆ 1.00 (ಒಂದು) ಅಂಕವನ್ನು ನೀಡಲಾಗುವುದು ಮತ್ತು ಪರೀಕ್ಷೆಯ ಅವಧಿಯು ಒಂದೂವರೆ ಗಂಟೆಯಾಗಿರುತ್ತದೆ.

30. ಪ್ರಶ್ನೆ ಪತ್ರಿಕೆಯಲ್ಲಿ ಮುದ್ರಣ ದೋಷವಿದ್ದಲ್ಲಿ ಅಥವಾ ಪ್ರಶ್ನೆ ಪತ್ರಿಕೆಯ ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಅದನ್ನು ಪರೀಕ್ಷಾ ಕೊಠಡಿಯ ಪರಿವೀಕ್ಷಕರ ಗಮನಕ್ಕೆ ತರಬಹುದೇ?

ಉ: ಹೌದು. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ, ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಸಮಿತಿಗೆ ಸ್ವೀಕೃತಿ ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವ್ವದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಧಿಸೂಚನೆಯನ್ನು ನೋಡುವುದು.

31. ಉತ್ತರ ಪತ್ರಿಕೆಯನ್ನು ಯಾರು ಮೌಲ್ಯ ಮಾಪನ ಮಾಡುತ್ತಾರೆ ?

ಉ: ನೇಮಕಾತಿ ಸಮಿತಿಯು ಮೌಲ್ಯಮಾಪನದ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತದೆ.

ಉತ್ತರ ಪತ್ರಿಕೆಯ ಓಎಮ್‌ಆರ್ (Optical Mark Recognition) ಕಾರ್ಬನ್‌ಲೇಸ್ ಪತ್ರಿಕೆಯಾಗಿದ್ದು ಇದನ್ನು ಗಣಕಯಂತ್ರದಲ್ಲಿ ಮೌಲ್ಯ ಮಾಪನ ಮಾಡಲಾಗುವುದು.

32. ಲಿಖಿತ ಪರೀಕ್ಷೆಗೆ ಕನಿಷ್ಠ ಅಂಕಗಳನ್ನು ನಿಗದಿಪಡಿಸಲಾಗಿದೆಯೇ?

ಉ: ಇಲ್ಲ. ಯಾವುದೇ ಕನಿಷ್ಠ ಅಂಕಗಳನ್ನು ನಿಗದಿಪಡಿಸಿರುವುದಿಲ್ಲ.

33. ಯಾವ ಬಣ್ಣದ ಪೆನ್ನಿನಿಂದ ಉತ್ತರ ಪತ್ರಿಕೆಯನ್ನು ಭರ್ತಿ ಮಾಡಬೇಕು ?

ಉ: ಇದಕ್ಕೆ ಸಂಬಂಧಿಸಿದಂತೆ, ಕಪ್ಪು ಅಥವಾ ನೀಲಿ ಬಾಲ್ ಪಾಯಿಂಟ್ ಪೆನ್ ಉಪಯೋಗಿಸುವುದು.

34. ಉತ್ತರ ಪತ್ರಿಕೆಯ ಮರು ಮೌಲ್ಯಮಾಪನ ಮಾಡುವ ಅವಕಾಶವಿದೆಯೇ ?

ಉ: ಇಲ್ಲ. ವೃಂದ ಮತ್ತು ನೇಮಕಾತಿ ನಿಯಮದಡಿಯಲ್ಲಿ ಉತ್ತರ ಪತ್ರಿಕೆಯ ಮರು ಮೌಲ್ಯಮಾಪನ ಮಾಡುವ ಅವಕಾಶವಿರುವುದಿಲ್ಲ. ಪರೀಕ್ಷೆಯು ಸ್ಪರ್ಧಾತ್ಮಕ ಪರೀಕ್ಷೆಯಾಗಿರುವುದರಿಂದ ಮರು ಮೌಲ್ಯಪಾನಕ್ಕೆ ಅವಕಾಶ ನೀಡಿರುವುದಿಲ್ಲ.

35. ತಾತ್ಕಲಿಕ ಆಯ್ಕೆ ಪಟ್ಟಿಯನ್ನು ಹೇಗೆ ತಯಾರಿಸಲಾಗುತ್ತದೆ ?

ಉ: ಅಭ್ಯರ್ಥಿಗಳು ಈ ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮತ್ತು ಅವರು ಅರ್ಹತಾ (Qualifying) ಪರೀಕ್ಷೆಯಲ್ಲಿ ಪಡೆದ ಶೇಕಡಾ ಅಂಕಗಳನ್ನೂ ಕೂಡಿಸಿ ಅದರ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ ಇರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು 1:1 ರ ಪ್ರಮಾಣದಲ್ಲಿ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ / ನಿಯಮನಾನುಸಾರ ತಯಾರಿಸಲಾಗುವುದು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

36. ವೈದ್ಯಕೀಯ ಪರೀಕ್ಷೆ ಎಂದರೇನು? ಇದರಲ್ಲಿ ಯಾವ ರೀತಿಯ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ?

ಉ: ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ಒಂದು ವೈದ್ಯಕೀಯ ಮಂಡಳಿಯ ಮುಂದೆ ಹಾಜರುಪಡಿಸಿ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ. ಇದರಲ್ಲಿ ಕಣ್ಣಿನ ಪರೀಕ್ಷೆ, ಶ್ರವಣ ಶಕ್ತಿ, ಅಪಧಮನಿ ಊತ, ಮಾತಿನಲ್ಲಿ ಅಡಚಣೆ ಮತ್ತು ಕ್ಷ–ಕಿರಣದ ಪರೀಕ್ಷೆಗಳನ್ನು ನಡೆಸಲಾಗುತ್ತದೆ.
(ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

37. ಮೂಲ ದಾಖಲಾತಿ ಎಂದರೇನು ?

ಉ: ಮೂಲ ದಾಖಲಾತಿ ಎಂದರೆ ಯಾವ ಹುದ್ದೆಗೆ ಸೇರಲು ಬಯಸುತ್ತಾರೋ ಆ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ, ಹುಟ್ಟಿದ ದಿನಾಂಕದ ಅಂಕಪಟ್ಟಿ ಹಾಗೂ ಮೀಸಲಾತಿಗಳನ್ನು ಕೋರಿದ್ದಲ್ಲಿ ಅಂತಹ ಪ್ರಮಾಣ ಪತ್ರದ ಮೂಲ ಪತ್ರಗಳು.

38. ಮೂಲ ದಾಖಲಾತಿಗಳನ್ನು ಯಾವಾಗ ಹಾಜರುಪಡಿಸಬೇಕು ?

ಉ: ನೇಮಕಾತಿ ಪ್ರಾಧಿಕಾರವು ಯಾವ ಹಂತದಲ್ಲಿಯಾದರೂ ಹಾಜರುಪಡಿಸಲು ಸೂಚಿಸಬಹುದು. ಅಭ್ಯರ್ಥಿಯು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ **25.06.2018** ರೊಳಗೆ ಸಿಂಧುವಾಗಿರುವಂತೆ ಮೂಲ ದಾಖಲಾತಿಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಹಾಜರುಪಡಿಸಲು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

39. ಮೂಲ ತರಬೇತಿ ಎಷ್ಟು ತಿಂಗಳಿರುತ್ತವೆ ?

ಉ: ನೇಮಕಾತಿ ಹೊಂದಿದ ಅಭ್ಯರ್ಥಿಗಳು ಪೊಲೀಸ್ ಇಲಾಖೆಯು ತೀರ್ಮಾನಿಸಿದ ತರಬೇತಿ ಕೇಂದ್ರದಲ್ಲಿ 9 ತಿಂಗಳ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿತ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು.
(ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

40. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಯಾವ ಜಾತಿ ಪ್ರಮಾಣ ಪತ್ರದ ಫಾರಂನ್ನು ಹಾಜರಪಡಿಸಬೇಕು ?

ಉ: ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಧಿಕಾರದಿಂದ ಸಹಿ ಮತ್ತು ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಮಾಡಿಸಿರಬೇಕು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ/ಬುಡಕಟ್ಟು : ನಮೂನೆ–ಡಿ

ಬಿ) ಪ್ರವರ್ಗ – 1 : ನಮೂನೆ–ಇ

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ : ನಮೂನೆ – ಎಫ್

ಇವುಗಳ ಪ್ರತಿಯನ್ನು ಮಾಹಿತಿ ಸೂಚಿಯಲ್ಲಿ ಮಾಹಿತಿಗಾಗಿ ಲಗತ್ತಿಸಿದೆ.

41. ನೇಮಕಾತಿಯಲ್ಲಿ ವಿವಿಧ ಜಾತಿ ಮತ್ತು ವರ್ಗಗಳಿಗೆ ಎಷ್ಟು ಮೀಸಲಾತಿಯನ್ನು ನೀಡಲಾಗುತ್ತದೆ ?

ಉ:

| | | |
|---|---|---|
| ಸಾಮಾನ್ಯ ವರ್ಗ | – | 50% |
| ಪರಿಶಿಷ್ಟ ಜಾತಿ | – | 15% |
| ಪರಿಶಿಷ್ಟ ಪಂಗಡ | – | 03% |
| ಪ್ರವರ್ಗ– 1 | – | 04% |
| ಪ್ರವರ್ಗ– 2ಎ | – | 15% |
| ಪ್ರವರ್ಗ– 2ಬಿ | – | 04% |
| ಪ್ರವರ್ಗ– 3ಎ | – | 04% |
| ಪ್ರವರ್ಗ– 3ಬಿ | – | 05% |

(ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/08/ಸೆಹಿಮ/95, ದಿನಾಂಕ: 20.06.1995 ರಲ್ಲಿರುವಂತೆ)

42. ಗ್ರಾಮೀಣ ಅಭ್ಯರ್ಥಿ ಎಂದರೇನು ? ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಗ್ರಾಮೀಣ ಅಭ್ಯರ್ಥಿ ಎನ್ನುತ್ತಾರೆ.

ಗ್ರಾಮೀಣ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

43. ಕನ್ನಡ ಮಾಧ್ಯಮ ಅಭ್ಯರ್ಥಿ ಎಂದರೇನು ? ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಕನ್ನಡ ಮಾಧ್ಯಮ ಅಭ್ಯರ್ಥಿ ಎನ್ನುತ್ತಾರೆ.

ಕನ್ನಡ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

44. ಮಾಜಿ ಸೈನಿಕ ಅಭ್ಯರ್ಥಿ ಎಂದರೇನು ?

ಉ: ಭೂಸೇನೆ, ವಾಯು ಸೇನೆ, ನೌಕಾ ಸೇನೆಯಲ್ಲಿ ಸೇವೆ ಸಲ್ಲಿಸಿ ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿರುವ ಯೋಧರನ್ನು ಮಾಜಿ ಸೈನಿಕ ಅಭ್ಯರ್ಥಿ ಎನ್ನುತ್ತಾರೆ.

45. ಯೋಜನಾ ನಿರಾಶ್ರಿತ ಅಭ್ಯರ್ಥಿ ಎಂದರೇನು ? ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: ಸರ್ಕಾರದ ಯೋಜನೆಗಳಿಂದ ತಾವು ಅವಲಂಬಿತರಾಗಿದ್ದ ಕೃಷಿ ಭೂಮಿ, ಮನೆಗಳನ್ನು ಕಳೆದುಕೊಂಡ ಅಭ್ಯರ್ಥಿಗಳನ್ನು ಯೋಜನಾ ನಿರಾಶ್ರಿತ ಅಭ್ಯರ್ಥಿ ಎನ್ನುತ್ತಾರೆ. ಪ್ರಮಾಣ ಪತ್ರವನ್ನು ನಿಗದಿ ಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

46. ಗ್ರಾಮೀಣ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷ್ಟು ನೀಡಲಾಗಿದೆ ?

ಉ: ಗ್ರಾಮೀಣ ಅಭ್ಯರ್ಥಿಗಳಿಗೆ 25% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

47. ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷ್ಟು ನೀಡಲಾಗಿದೆ ?

ಉ: ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

48. ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷ್ಟು ನೀಡಲಾಗಿದೆ ?

ಉ: ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ:04.01.2008ರ ಪ್ರಕಾರ)

49. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಶೇಕಡ ಮೀಸಲಾತಿ ಎಷ್ಟು ನೀಡಲಾಗಿದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ 10% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

50. ಮಾಜಿ ಸೈನಿಕ ಅಭ್ಯರ್ಥಿಗಳು ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗುತ್ತದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಪ್ರಮಾಣ ಪತ್ರದ ಜೊತೆಗೆ ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ / ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಜಾತಿ ಮೀಸಲಾತಿ ಕೋರಿದ್ದಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕಾಗುತ್ತದೆ.

50ಎ. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅರ್ಜಿಸಲ್ಲಿಸಲು ಬೇಕಾಗಿರುವ ವಿದ್ಯಾರ್ಹತೆ ?

ಉ: ಮಾಜಿ ಸೈನಿಕನು ಎಸ್.ಎಸ್.ಎಲ್.ಸಿ./10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕ, ಅಂದರೆ **25.06.2018** ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ **25.06.2018** ರೊಳಗೆ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

50.ಬಿ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೈನ್ಯದಿಂದ ವಿಯೋಜನೆ ಹೊಂದುವಾಗ ನೀಡುವ ಗ್ರಾಜ್ಯುಯೇಟ್ ಪ್ರಮಾಣಪತ್ರದಿಂದ ಹೊಂದಿದ್ದಾರೆ ಅರ್ಜಿಸಲ್ಲಿಸಬಹುದೇ?

ಉ: ಮಾಜಿ ಸೈನಿಕನು ಎಸ್.ಎಸ್.ಎಲ್.ಸಿ ಉತ್ತೀರ್ಣ ಹೊಂದಿ, ಸೈನಿಕನಾಗಿ ಭರ್ತಿ ಹೊಂದಿ, ತದ ನಂತರ ಸೈನ್ಯದಿಂದ ವಿಯೋಜನೆ ಹೊಂದುವಾಗ, ಸೈನ್ಯದಿಂದ ಮಾಜಿ ಸೈನಿಕನಿಗೆ ನೀಡುವ ಗ್ರಾಜ್ಯುಯೇಟ್ ಸರ್ಟಿಫಿಕೇಟ್ ಹೊಂದಿರುವ ಮಾಜಿಸೈನಿಕ ಅಭ್ಯರ್ಥಿಗಳು ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

50.ಸಿ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ನಂತರ ಮೇರಿಟ್ ಮೇಲೆ ತಾತ್ಕಾಲಿಕ ಆಯ್ಕೆಪಟ್ಟಿ ತಯಾರಿಸುವಾಗ ಯಾವ ರೀತಿಯಲ್ಲಿ ಪರಿಗಣಿಸುತ್ತೀರಿ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ (ಎಸ್.ಎಸ್.ಎಲ್‌ಸಿ / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆ) ಪಡೆದ ಶೇಕಡಾವಾರನ್ನು ಕೂಡಿಸಿ ಅದರ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು.

51. ಮಾಜಿ ಸೈನಿಕ ಅಭ್ಯರ್ಥಿಗಳು ಒಮ್ಮೆ ಸರ್ಕಾರಿ ನೌಕರಿಗೆ ಮಾಜಿ ಸೈನಿಕ ಮೀಸಲಾತಿಯನ್ನು ಕೋರಿ ಆಯ್ಕೆಯಾದಲ್ಲಿ, ಮತ್ತೊಮ್ಮೆ ಮಾಜಿ ಸೈನಿಕ ಮೀಸಲಾತಿಯನ್ನು ಪಡೆಯ ಬಹುದೇ ?

ಉ: ಇಲ್ಲ. ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿಸೈನಿಕ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ರದ್ದಾಗುತ್ತದೆ.

52. ಮಾಜಿ ಸೈನಿಕ ಅಭ್ಯರ್ಥಿಗಳು ಯಾವಾಗ ಅರ್ಜಿಯನ್ನು ಸಲ್ಲಿಸಬಹುದಾಗಿದೆ?

ಉ: ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ

ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದು, ಅಂತಹ ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

53. ಮಾಜಿ ಸೈನಿಕನ ಮಕ್ಕಳು ಸಹ ಮಾಜಿ ಸೈನಿಕ ಮೀಸಲಾತಿಯಲ್ಲಿ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಸೇನೆಯಲ್ಲಿ ಸೇವೆ ನಿರ್ವಹಿಸಿ ಮರಣ ಅಥವಾ ಶಾಶ್ವತ ವಿಕಲತೆ ಹೊಂದಿದ ಮಾಜಿ ಸೈನಿಕರ ಮಕ್ಕಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

54. ಮಾಜಿ ಸೈನಿಕ ಮಕ್ಕಳಿಗೆ ಶೇಕಡ ಮೀಸಲಾತಿ ಎಷ್ಟು ಪರಿಗಣಸಲಾಗುವುದು ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು 10% ಮೀಸಲಾತಿಯೊಳಗೆ ಮಾಜಿ ಸೈನಿಕ ಮಕ್ಕಳನ್ನ ಸಹ ಪರಿಗಣಲಾಗುವುದು. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

55. ಮಾಜಿ ಸೈನಿಕ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ವಿನಾಯಿತಿ ಉಂಟೆ?

ಉ: ಮಾಜಿ ಸೈನಿಕ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾಢ್ಯತೆ ಪರೀಕ್ಷೆಯಲ್ಲಿ ಸಡಲಿಕೆ ಇರುವುದಿಲ್ಲ ಮತ್ತು ಸಾಮಾನ್ಯ ಅಭ್ಯರ್ಥಿಗಳಿಗೆ ಇರುವ ಅರ್ಹತೆಯನ್ನು ಮಟ್ಟವನ್ನು ಪೂರ್ಣಗೊಳಿಸಿ ಬೇಕಾಗುತ್ತದೆ.

56. ಅಭ್ಯರ್ಥಿಗಳಿಗೆ ದೈಹಿಕ ಪರೀಕ್ಷ ಮತ್ತು ಸಹಿಷ್ಣುತೆ ಪರೀಕ್ಷೆಗೆ ಮತ್ತು ಲಿಖಿತ ಪರೀಕ್ಷಗೆ ಕರೆ ಪತ್ರಗಳನ್ನು ಅಂಚೆ ಮುಖಾಂತರ ಕಳುಹಿಸಲಾಗುವುದು?

ಉ: ಪೋಲಿಸ್ ಕಾನ್ಸ್‌ಟೇಬಲ್ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತಹ ಅಭ್ಯರ್ಥಿಗಳಿಗೆ ದೈಹಿಕ ಮತ್ತು ಸಹಿಷ್ಣುತ ಪರೀಕ್ಷೆಗೆ ಮತ್ತು ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ಅಂಚೆಯ ಮುಖಾಂತರ ಕಳುಹಿಸಲಾಗುವುದಿಲ್ಲ. ಪರೀಕ್ಷೆಯ ಕರೆ ಪತ್ರಗಳ ಅನ್‌ಲೈನ್‌ನಲ್ಲಿ ಲಭ್ಯವಿರುವುದು ಮತ್ತು ಅಭ್ಯರ್ಥಿ ಸ್ವತಹ: ಅನ್‌ಲೈನ್‌ನಿಂದ ಕರೆ ಪತ್ರಗಳನ್ನು ಡೌನ್‌ಲೋಡ್ ಮಾಡಿ ಮುದ್ರಿಸಿಕೊಂಡು ಪರೀಕ್ಷಗೆ ಕರೆಪತ್ರದೊಂದಿಗೆ ಹಾಜರಾಗತಕ್ಕದ್ದು.

57. ಕರೆಪತ್ರಗಳನ್ನು ತರದೆ ಪರೀಕ್ಷೆಗೆ ಹಾಜರಾಗಬಹುದೇ?

ಉ: ಆನ್‌ಲೈನ್‌ನಲ್ಲಿ ಲಭ್ಯವಿರುವ ಕರೆಪತ್ರಗಳನ್ನು ತರದೆ ಯಾವುದೇ ಅಭ್ಯರ್ಥಿಯನ್ನು ಪರೀಕ್ಷೆಗೆ ಹಾಜರಾಗಲು ಪರಿಗಣಿಸಲಾಗುವುದಿಲ್ಲ. ದೈಹಿಕ ಪರೀಕ್ಷಗೆ ಹಾಜರಾಗುವ ಆನ್‌ಲೈನ್ ಮುಂಖಾತರ ಸಲ್ಲಿದ ಅಭ್ಯರ್ಥಿಗಳು ಮುದ್ರಿತ ಅರ್ಜಿ ಜೆರಾಕ್ಸ್ ಪ್ರತಿಯೊಂದಿಗೆ ಬ್ಯಾಂಕ್‌ಗೆ ಶುಲ್ಕ ಪವಾತಿಸಿದ ಮೂಲ ಚಲನ್‌ನ ಪ್ರತಿಯನ್ನು ತಪ್ಪದೆ ಹಾಜರುಪಡಿಸತಕ್ಕದ್ದು.

58. ದೈಹಿಕ ಪರೀಕ್ಷೆಯ ಮತ್ತು ಲಿಖಿತ ಪರೀಕ್ಷೆಗೆ ಅರ್ಹನಾಗಿರುವ ಬಗ್ಗೆ ಮಾಹಿತಿ ಎಲ್ಲಿ ಲಭ್ಯವಾಗುತ್ತದೆ?

ಉ: ಪ್ರತಿ ಪರೀಕ್ಷೆಯ ಫಲಿತಾಂಶ ಮತ್ತು ಅಭ್ಯರ್ಥಿಯು ಅರ್ಹತೆ ಹೊಂದಿರುವ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಪ್ರಕಟಿಸಲಾಗುವುದು.

59. ಎಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಬಹುದಾಗಿದೆ?

ಉ: ತಪ್ಪು ಮಾಹಿತಿಯನ್ನು ಅನ್‌ಲೈನ್‌ನಲ್ಲಿ ತುಂಬಿ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳ ಪರೀಕ್ಷೆಯ ಮುಂಚಿತವಾಗಿ ಮತ್ತು ಪರೀಕ್ಷೆಯ ನಂತರ ಕಂಡುಬಂದಲ್ಲಿ ಕಾನೂನು ರೀತ್ಯಾ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

60. ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವೆಬ್-ಸೈಟ್ ಯಾವುದು ?

ಉ: ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಮಾಹಿತಿಯನ್ನು ತಿಳಿದುಕೊಳ್ಳಲು www.ksp.gov.in or www.rec18.ksp-online.co.in ನ್ನು ನೋಡುವುದು.

61. ವಸ್ತುನಿಷ್ಠ ಮಾದರಿ ಪ್ರಶ್ನೆಗಳ ನಕರಾತ್ಮಕ ಉತ್ತರಗಳಿಗೆ ಎಷ್ಟು ಅಂಕಗಳನ್ನು ಕಳೆಯಲಾಗುತ್ತದೆ ?

ಉ: ವಸ್ತುನಿಷ್ಠ ಮಾದರಿ ಪ್ರಶ್ನೆಗಳ ನಕರಾತ್ಮಕ ಉತ್ತರಗಳಿಗೆ ಯಾವುದೇ ಅಂಕಗಳನ್ನು ಕಳೆಯಲಾಗುತ್ತದೆ.

62. ಪೊಲೀಸ್ ಕಾನ್ಸ್‌ಟೇಬಲ್ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ಕೆ.ಎಸ್.ಐ.ಎಸ್.ಎಫ್) (ಪುರುಷ ಮತ್ತು ಮಹಿಳಾ) ಹುದ್ದೆಗೆ ವೇತನ ಶ್ರೇಣಿ ಎಷ್ಟು ?

ಉ: ವಿಶೇಷ ರಿಸರ್ವ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ವೇತನ ಶ್ರೇಣಿ ರೂ. 11600–200–12000–250–13000–300–14200–350–15600–400–17200–450–19000–500–21000 ಇರುತ್ತದೆ.

63. ದೈಹಿಕ ಪರೀಕ್ಷೆಗೆ/ಲಿಖಿತ ಪರೀಕ್ಷೆಗೆ ಹಾಜರಾದಾಗ ಯಾವ ಗುರುತಿನ ಚೀಟಿಯನ್ನು ಹಾಜರು ಪಡಿಸಬೇಕಾಗುತ್ತದೆ ?

ಉ: ಈ ಕೆಳಗಿನ ಯಾವುದಾದರೊಂದು ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ತೋರಿಸಬೇಕು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen’s pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

64. ದೈಹಿಕ ಪರೀಕ್ಷಾ ಸಮಯದಲ್ಲಿ ಅಭ್ಯರ್ಥಿಗೆ ಶಾರೀರಕವಾಗಿ ಅನಾಹುತ ಸಂಭವಿಸಿದ ಪಕ್ಷದಲ್ಲಿ ನೇಮಕಾತಿ ಸಮಿತಿಯು ಹೊಣೆಯಾಗಿದೆಯೇ?

ಉ: ಸಹಿಷ್ಣುತ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಸಹಿಷ್ಣುತ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ/ ತೊಂದರೆಗಳಿಗೆ ಪೊಲೀಸ್ ಇಲಾಖೆ/ನೇಮಕಾತಿ ಸಮಿತಿಯ ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾಡ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು.

65. ಪರೀಕ್ಷಾ ಶುಲ್ಕವನ್ನು ಯಾವ ವಿಧಾನದಲ್ಲಿ ಪಾವತಿಸಬೇಕು ?

ಉ: ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಎಸ್.ಬಿ.ಎಮ್ ಮತ್ತು ಎಸ್.ಬಿ.ಹೆಚ್ ಬ್ಯಾಂಕ್‌ನಲ್ಲಿ ಮಾತ್ರ ಪಾವತಿಸತಕ್ಕದ್ದು. ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

66. ವಿಳಾಸದಲ್ಲಿ ಬದಲಾವಣೆ ಇದ್ದಲ್ಲಿ ಅದನ್ನು ಬದಲಾಯಿಸಬಹುದೇ ?

ಉ: ಇದಕ್ಕೆ ಸಂಬಂಧಿಸಿದಂತೆ ನೇಮಕಾತಿ ಸಮಿತಿಗೆ ಅರ್ಜಿಯನ್ನು ನೀಡಿ ನಂತರ ಅನುಮತಿಯ ಮೇಲೆ ವಿಳಾಸವನ್ನು ಬದಲಿಸಲು ಪ್ರಯತ್ನಿಸಲಾಗುವುದು.

67. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಯಾವ ಪ್ರಮಾಣಪತ್ರವನ್ನು ಸಲ್ಲಿಸಬೇಕು?

ಉ: ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಕೇಂದ್ರ / ರಾಜ್ಯ ಸರ್ಕಾರದ ಅಥವಾ ಸರ್ಕಾರದ ಯಾವುದೇ ಪ್ರಾಧಿಕಾರ ಅಥವಾ ಕೇಂದ್ರ ಅಥವಾ ರಾಜ್ಯ ಸಾರ್ವಜನಿಕ ಸ್ವಾಮ್ಯಗಳಲ್ಲಿ ನೌಕರಿಯಲ್ಲಿದ್ದಲ್ಲಿ ಅಂತಹವರು ಇಲಾಖಾ ಮುಖ್ಯಸ್ಥರ ಅಥವಾ ನೇಮಕಾತಿ ಪ್ರಾಧಿಕಾರಿಯಿಂದ ಸೂಕ್ತ ದೃಢೀಕರಣದ ಸಹಿಯೊಂದಿಗೆ ಸಮೂಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಬೇಕು ಹಾಗೂ ಪೊಲೀಸ್ ಇಲಾಖೆಯಲ್ಲಿ ನೇಮಕಗೊಂಡಲ್ಲಿ ಪೊಲೀಸ್ ಸೇವೆಗೆ ಕರ್ತವ್ಯದಿಂದ ಬಿಡುಗಡೆ ಮಾಡಲು ಅನುಮತಿ ಪತ್ರ / ನಿರಾಕ್ಷೇಪಣ ಪ್ರಮಾಣಪತ್ರವನ್ನು (No Objection Certificate) ನಿಗದಿಪಡಿಸಿದ ದಿನಾಂಕದೊಳಗೆ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

68. ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಯಾರು ಅನರ್ಹರೆಂದು ಪರಿಗಣಿಸುತ್ತೀರಿ?

ಉ: 1. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ.

2. ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಯನ್ನು ಹೊರತು ಪಡಿಸಿ, ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ್ ಸಹಾಯಕ್ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

ಅಂತಹ ಸೇನೆಯಿಂದ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು. ಅಥವಾ ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ ಅಥವಾ ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

ಎ. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

ಬಿ. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯ ಹೊಂದಿ ಬಿಡುಗಡೆಯಾದ ವ್ಯಕ್ತಿ.

ಸಿ. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು ಹಾಗೂ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

4. ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

5. ಯಾವುದೇ ಅರ್ಜಿದಾರರು ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು. ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ / ಖುಲಾಸೆಯಾಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದು ಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.

69. ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವ ಪ್ರಮಾಣಪತ್ರಗಳು ಸಲ್ಲಿಸಬೇಕಾಗಿರುತ್ತದೆ.?

ಉ: ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುವುದಿಲ್ಲ, ಆದರೆ ಪ್ರಮಾಣಪತ್ರದ ಮಾಹಿತಿ ಮತ್ತು ಪ್ರಮಾಣಪತ್ರ ಪಡೆದ ದಿನಾಂಕ ನಮೂದಿಸಬೇಕಾಗಿರುತ್ತದೆ. ತದ ನಂತರ ಅರ್ಹ ಅಭ್ಯರ್ಥಿಗಳು ಮೂಲ ದಾಖಲಾತಿ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲಾತಿ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು ಹಾಗು ಅರ್ಜಿಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡಿದರಬೇಕು.

ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಒಂದು ವೇಳೆ ಸಲ್ಲಿಸಿ ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

70. ಅಭ್ಯರ್ಥಿಗಳು ನೇಮಕಾತಿಯ ಯಾವುದೇ ನಿಯಮಗಳನ್ನು ಪ್ರಶ್ನಿಸಬಹುದೇ?

ಉ: ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

71. ಪರೀಕ್ಷೆ ಮುಗಿದ ವೆಬ್‌ಸೈಟ್‌ನಲ್ಲಿ ಪ್ರಾವಿಷನ್ ಕೀ ಉತ್ತರವನ್ನು ಪ್ರಶ್ನಿಸಬಹುದೇ?

ಉ: ಪರೀಕ್ಷೆ ಮುಗಿದ ಒಂದು ಅಥವಾ ಎರಡು ದಿನಗಳ ನಂತರ Provisional Answer Key ಉತ್ತರಗಳನ್ನು ವೆಬ್‌ಸೈಟ್‌ನಲ್ಲಿ ಹಾಗೂ ಸಂಬಂಧಪಟ್ಟು ಘಟಕಗಳಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಅದಕ್ಕೆ ಒಂದು ವಾರದ ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆಗಳು ಬಂದ ನಂತರ ಅದನ್ನು ಒಂದು ನುರಿತ ಸಮಿತಿ(ಕಮಿಟಿ)ಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು Final Answer Key ಯನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಉತ್ತರ ಕೀಗಳ ಪ್ರಕಾರ ಒ.ಎಂ.ಆರ್ ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು.

72. ಅಭ್ಯರ್ಥಿಗಳಿಗೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದೇ?

ಉ: ಅಭ್ಯರ್ಥಿಯ ಅಂತರ್‌ಜಾಲದಲ್ಲಿ ಅರ್ಜಿಯನ್ನು ತುಂಬುವಾಗ ನೀಡಿರುವ ಮಾಹಿತಗಳ ಅನ್ವಯ ಸಮರ್ಪಕವಾಗಿ ಭರ್ತಿ ಮಾಡಿದೆ, Junk Character / Unknown language ತುಂಬಿದ ಅರ್ಜಿಗಳನ್ನು ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

73. ಲಿಖಿತ ಪರೀಕ್ಷೆಯನ್ನು ಎಲ್ಲಿ ನಡೆಸಲಾಗುತ್ತದೆ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತೀರ್ಣರಾದವರಿಗೆ ಲಿಖಿತ ಪರೀಕ್ಷೆಯನ್ನು ನೇಮಕಾತಿ ಸಮಿತಿಯು ನಿಗದಿಪಡಿಸಿದ ಕೇಂದ್ರಗಳಲ್ಲಿ ನಡೆಸಲಾಗುವುದು.

**ವಿಶೇಷ ಸೂಚನೆ :–**

1) **ನಿಗದಿ ಪಡಿಸಿರುವ ನಮೂನೆಯ ಜಾತಿ / ಪ್ರವರ್ಗ ಪ್ರಮಾಣ ಪತ್ರಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಮತ್ತು ಯೋಜನಾ ನಿರಾಶ್ರಿತ ಪ್ರಮಾಣಪತ್ರ, ಕನ್ನಡ ಮಾಧ್ಯಮ ಪ್ರಮಾಣಪತ್ರ, ಗ್ರಾಮೀಣ ಪ್ರಮಾಣಪತ್ರ ಮತ್ತು ಮಾಜಿಸೈನಿಕನ ವಿಯೋಜನೆ ಪ್ರಮಾಣ ಪತ್ರ(ಪೂರ್ವಾನುಮತಿ)ಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.**

2) **ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ದೈಹಿಕ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗೆ ನಡೆಯುವುದರ ಬಗ್ಗೆ ಅರ್ಹಗೊಂಡ ಅಭ್ಯರ್ಥಿಗಳಿಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ ಮತ್ತು ಅಭ್ಯರ್ಥಿಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಬಹುದಾಗಿದೆ.**

3) **ಇನ್ನೂ ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ನೇಮಕಾತಿ ಕಛೇರಿಯ ಈ ಕೆಳಕಂಡ ಸಹಾಯವಾಣಿಯ ಸಂಖ್ಯೆ ಮತ್ತು ಇಮೇಲ್ ನಿಂದ ಪಡೆಯಬಹುದಾಗಿರುತ್ತದೆ ಹಾಗೂ ಅರ್ಜಿ ತುಂಬುವ ವಿಧಾನ ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.**

**ಸಹಾಯವಾಣಿ ಸಂಖ್ಯೆ**

| | |
|---|---|
| ನೇಮಕಾತಿ ಘಟಕ, ಬೆಂಗಳೂರು | 080–22943346 |